ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ: ಸಿ5(9)/ಕ.ಸುತ್ತೋಲೆ/30/2019-20

ದಿನಾಂಕ:23/03/2020

ಜ್ಞಾಪನ

ವಿಷಯ: ಕೊರೊನಾ ವೈರಸ್ (ಕೋವಿಡ್-19) ನ ನಿಯಂತ್ರಣಕ್ಕಾಗಿ ತೆಗೆದುಕೊಳ್ಳಬೇಕಾಗಿರುವ ಮುಂಜಾಗ್ರತಾ ಕ್ರಮಗಳ ಬಗ್ಗೆ.

ಉಲ್ಲೇಖ: ಸರ್ಕಾರದ ಜ್ಞಾಪನ ಸಂಖ್ಯೆ:ಸಿಆಸುಇ 123 ಡಿಬಿಎಂ 2020 ದಿನಾಂಕ: 23/03/2020.

****

ಕೊರೊನಾ ವೈರಸ್ (ಕೋವಿಡ್-19) ಹರಡುವುದನ್ನು ತಪ್ಪಿಸುವ ಸಲುವಾಗಿ ಎಲ್ಲಾ ಅಧಿಕಾರಿಗಳು ಹಾಗೂ ನೌಕರರುಗಳು ಅಗತ್ಯವಾಗಿ ಕೆಲವು ಮುನ್ನೆಚ್ಚರಿಕಾ ಕ್ರಮಗಳನ್ನು ಅನುಸರಿಸಿ ಅದರಂತೆಯೇ, ನೌಕರರುಗಳ ಯೋಗಕ್ಷೇಮಕ್ಕಾಗಿ ಹಾಗೂ ಸಾರ್ವಜನಿಕ ಹಿತಾಸಕ್ತಿಯಿಂದ ಸಲಹಾ ಕ್ರಮಗಳನ್ನು ಕೈಗೊಳ್ಳಲು ಉಲ್ಲೇಖಿತ ಸರ್ಕಾರದ ಜ್ಞಾಪನದಲ್ಲಿ ತಿಳಿಸಲಾಗಿದೆ. ಅದರಂತೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧಿಕಾರಿಗಳು/ನೌಕರರು ಉಲ್ಲೇಖಿತ ಸರ್ಕಾರದ ಆದೇಶದಂತೆ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಿದೆ.(ಉಲ್ಲೇಖಿತ ಸರ್ಕಾರದ ಪತ್ರವನ್ನು ಈ ಪತ್ರದೊಂದಿಗೆ ಲಗತ್ತಿಸಿದೆ)

[ಅರುಳ್ ಕುಮಾರ್]

ಜಂಟಿ ನಿರ್ದೇಶಕರು[ಆಡಳಿತ]

**ಇವರಿಗೆ ಮುಂದಿನ ಕ್ರಮಕ್ಕಾಗಿ/ಮಾಹಿತಿಗಾಗಿ.**

1) ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ, ಕರ್ನಾಟಕ, ಬೆಂಗಳೂರು ಇವರಿಗೆ ಮುಂದಿನ ಕ್ರಮಕ್ಕಾಗಿ.
2) ಅಪರ ಆಯುಕ್ತರು ಧಾರವಾಡ /ಕಲಬುರಗಿ ಇವರಿಗೆ ಮುಂದಿನ ಕ್ರಮಕ್ಕಾಗಿ.
3) ಈ ಕಛೇರಿಯ ಎಲ್ಲಾ ಅಧಿಕಾರಿಗಳಿಗೆ ಮುಂದಿನ ಕ್ರಮಕ್ಕಾಗಿ.
4) ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ ಮುಂದಿನ ಕ್ರಮಕ್ಕಾಗಿ.
5) ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಹ ನಿರ್ದೇಶಕರುಗಳಿಗೆ ಮುಂದಿನ ಕ್ರಮಕ್ಕಾಗಿ.
6) ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ(ಆಡಳಿತ), ಇವರಿಗೆ ಮುಂದಿನ ಕ್ರಮಕ್ಕಾಗಿ.
7) ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು(ಅಭಿವೃದ್ಧಿ), ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ(ಡಯಟ್), ಇವರಿಗೆ ಮುಂದಿನ ಕ್ರಮಕ್ಕಾಗಿ.
8) ಮಾನ್ಯ ಆಯುಕ್ತರ ಆಪ್ತ ಕಾರ್ಯದರ್ಶಿಗಳಿಗೆ ಮಾಹಿತಿಗಾಗಿ.
9) ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ ಇವರಿಗೆ ಕಳುಹಿಸುತ್ತಾ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಿದೆ.
10) ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮುಂದಿನ ಕ್ರಮಕ್ಕಾಗಿ
11) ಈ ಕಛೇರಿಯ ಎಲ್ಲಾ ಸಿಬ್ಬಂದಿಗಳಿಗೆ.
12) ಕಛೇರಿ ಪ್ರತಿ.

**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 123 ಡಿಬಿಎಂ 2020

ಕರ್ನಾಟಕ ಸರ್ಕಾರ ಸಚಿವಾಲಯ
ವಿಧಾನ ಸೌಧ
ಬೆಂಗಳೂರು, ದಿನಾಂಕ: 23.03.2020

**<u>ಕಛೇರಿ ಜ್ಞಾಪನ</u>**

**ವಿಷಯ: ಕೊರೊನಾ ವೈರಸ್ (ಕೋವಿಡ್-19)ನ ನಿಯಂತ್ರಣಕ್ಕಾಗಿ ತೆಗೆದುಕೊಳ್ಳಬೇಕಾಗಿರುವ ಮುಂಜಾಗ್ರತಾ ಕ್ರಮಗಳ ಬಗ್ಗೆ.**

* * *

ಕೊರೊನಾ ವೈರಸ್ (ಕೋವಿಡ್-10) ಹರಡುವುದನ್ನು ತಪ್ಪಿಸುವ ಸಲುವಾಗಿ ಎಲ್ಲಾ ನೌಕರರುಗಳು ಹಾಗೂ ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಇಲಾಖೆಗಳು ಅಗತ್ಯವಾಗಿ ಕೆಲವು ಮುನ್ನೆಚ್ಚರಿಕಾ ಕ್ರಮಗಳನ್ನು ಅನುಸರಿಸಬೇಕಾಗಿರುತ್ತದೆ. ಅದರಂತೆಯೇ, ಎಲ್ಲಾ ಸರ್ಕಾರಿ ನೌಕರರುಗಳ ಯೋಗಕ್ಷೇಮಕ್ಕಾಗಿ ಹಾಗೂ ಸಾರ್ವಜನಿಕ ಹಿತಾಸಕ್ತಿಯಿಂದ ಕೆಳಕಂಡ ಸಲಹಾ ಕ್ರಮಗಳನ್ನು ಹೊರಡಿಸಲು ನಿರ್ಧರಿಸಲಾಗಿದೆ.

1. **<u>ಎಲ್ಲಾ ಇಲಾಖೆಗಳು ಕೆಳಕಂಡ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವಂತೆ ಸೂಚಿಸಲಾಗಿದೆ</u>**:-

i) ಹೆಚ್ಚಿನ ಸಂಖ್ಯೆಯಲ್ಲಿ ಜನರ ಓಡಾಟ ಇರುವ ಸರ್ಕಾರಿ ಕಟ್ಟಡಗಳ ಪ್ರವೇಶ ದ್ವಾರಗಳಲ್ಲಿ ಅವಶ್ಯವಾಗಿ ಸ್ಯಾನಿಟೈಸರ್ ಗಳನ್ನು ಇರಿಸುವುದು. ಜ್ವರ ದಂತಹ ರೋಗ ಲಕ್ಷಣಗಳಿರುವ ವ್ಯಕ್ತಿಗಳಿಗೆ ಅಗತ್ಯ ಚಿಕಿತ್ಸೆ ಪಡೆಯುವಂತೆ/ ಇತರರಿಂದ ಪ್ರತ್ಯೇಕವಾಗಿರುವಂತೆ ಸೂಚಿಸುವುದು.

ii) ಸಾಧ್ಯವಾದಷ್ಟು ಮಟ್ಟಿಗೆ ಸಭೆಗಳನ್ನು ವೀಡಿಯೋ ಸಂವಾದದ ಮೂಲಕ ನಡೆಸುವುದು. ಅಗತ್ಯಕ್ಕೆ ಹೊರತಾದ, ಹೆಚ್ಚಿನ ಸಂಖ್ಯೆಯ ಜನರನ್ನೊಳಗೊಂಡ ಸಭೆಗಳನ್ನು ಕಡಿಮೆ ಮಾಡುವುದು ಅಥವಾ ಮರುನಿಗದಿಪಡಿಸುವುದು.

iii) ಅನಗತ್ಯವಾದ ಅಧಿಕೃತ ಪ್ರಯಾಣವನ್ನು ತಪ್ಪಿಸುವುದು.

iv) ಸರ್ಕಾರಿ ಕಟ್ಟಡಗಳ ಸಂಕೀರ್ಣದಲ್ಲಿರುವ ಎಲ್ಲಾ ಜಿಮ್ / ಮನರಂಜನಾ ಕೇಂದ್ರಗಳನ್ನು ಮುಚ್ಚುವುದು.

v) ಹೆಚ್ಚಿನ ಸಂಖ್ಯೆಯಲ್ಲಿ ಜನರ ಓಡಾಟ ಇರುವ ಕಚೇರಿಗಳಲ್ಲಿ ಪದೇ ಪದೇ ಸ್ಪರ್ಶಿಸಲಾಗುವ ಸ್ಥಳಗಳನ್ನು ವಿಶೇಷ ಮುತುವರ್ಜಿಯಿಂದ ಸ್ವಚ್ಛಗೊಳಿಸುವುದು ಹಾಗೂ ಆಗಾಗ್ಗ ಸ್ಯಾನಿಟೈಸ್ ಮಾಡುವುದು.

vi) ಸರ್ಕಾರಿ ಕಛೇರಿಗಳಲ್ಲಿರುವ ಶೌಚಾಲಯಗಳಲ್ಲಿ ನಿರಂತರ ನೀರಿನ ವ್ಯವಸ್ಥೆ ಹಾಗೂ ಸೋಪ್ ಗಳ ಪೂರೈಕೆ ಇರುವುದರ ಬಗ್ಗೆ ಖಚಿತಪಡಿಸಿಕೊಳ್ಳುವುದು.

vii) ಎಲ್ಲಾ ಸರ್ಕಾರಿ ನೌಕರರುಗಳಿಗೆ ವೈಯುಕ್ತಿಕ ಆರೋಗ್ಯದ ಕಡೆಗೆ ಗಮನಕೊಡುವಂತೆ ನಿರ್ದೇಶನ ನೀಡುವುದು ಹಾಗೂ ಉಸಿರಾಟ ತೊಂದರೆ / ಜ್ವರ ಮತ್ತು ಅನಾರೋಗ್ಯ ಸಮಸ್ಯೆಯಿದ್ದಲ್ಲಿ ಸಕ್ಷಮ ಅಧಿಕಾರಿಗಳ ಗಮನಕ್ಕೆ ತಂದು ಕೂಡಲೇ ಕಛೇರಿ ಪ್ರದೇಶವನ್ನು ಬಿಟ್ಟು ಹೋಗುವುದು.

viii) ಸ್ವಯಂ ದಿಗ್ಬಂಧನದ ಸಲುವಾಗಿ ವಿದೇಶದಿಂದ ಹಿಂದಿರುಗಿದ ಅಥವಾ ಅಂತಹವರ ಕುಟುಂಬ ಸದಸ್ಯರಾದ ನೌಕರರುಗಳು ರಜೆಗಾಗಿ ಮನವಿ ಸಲ್ಲಿಸಿದಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ರಜೆ ಮಂಜೂರಾತಿ ಪ್ರಾಧಿಕಾರಗಳು ಅವರುಗಳಿಗೆ ಕೂಡಲೇ ರಜೆಯನ್ನು ನೀಡುವುದು.

23/3/2020

85 (9) 23/03/2020

Scanned with CamScanner

ix) ಹೆಚ್ಚಿನ ಅಪಾಯಕ್ಕೊಳಗಾಗುವ ನೌಕರರು ಅಂದರೆ ವಯಸ್ಸಾದ ಹಿರಿಯ ನೌಕರರು, ಗರ್ಭಿಣಿಯರು ಮತ್ತು ವೈದ್ಯಕೀಯ ತೊಂದರೆಗಳ ಹಿನ್ನೆಲೆಯಿರುವ ನೌಕರರುಗಳಿಗೆ ಹೆಚ್ಚಿನ ಮುನ್ನೆಚ್ಚರಿಕೆ ವಹಿಸುವಂತೆ ನಿರ್ದೇಶಿಸುವುದು. ಅಂತಹ ನೌಕರರುಗಳು ನೇರವಾಗಿ ಸಾರ್ವಜನಿಕ ಸಂಪರ್ಕಕ್ಕೆ ಬರುವಂತಹ ಮುಂಭಾಗದ ಕಛೇರಿಗಳಲ್ಲಿ ಕರ್ತವ್ಯ ನಿರ್ವಹಿಸದಂತೆ ಸಚಿವಾಲಯದ ಎಲ್ಲಾ ಇಲಾಖೆಗಳು ನಿಗಾ ವಹಿಸುವುದು.

2. ಇದಕ್ಕನುಗುಣವಾಗಿ ಅನುಸರಿಸಬೇಕಾದ / ಅನುಸರಿಸಬಾರದ ಕ್ರಮಗಳ ಬಗ್ಗೆ ಸೂಚನೆಗಳನ್ನು ಪತ್ಯೇಕ ಅನುಬಂಧದಲ್ಲಿ ವ್ಯಾಪಕ ಪ್ರಚಾರಕ್ಕಾಗಿ ಇರಿಸಲಾಗಿದೆ.

(ಹೆಚ್. ಎಸ್. ಚನ್ನಬಸಪ್ಪ)
ಸರ್ಕಾರದ ಉಪ ಕಾರ್ಯದರ್ಶಿ
ಸಿಆಸುಇ (ಕಾರ್ಯಕಾರಿ)

1. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ. ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ
3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು,/ಕಾರ್ಯದರ್ಶಿಗಳು/ವಿಶೇಷ ಕಾರ್ಯದರ್ಶಿಗಳು, ವಿಧಾನಸೌಧ/ವಿಕಾಸಸೌಧ, ಬಹುಮಹಡಿ ಕಟ್ಟಡ.
4. ಸಭಾಧ್ಯಕ್ಷರ ಅಪ್ತ ಕಾರ್ಯದರ್ಶಿಯವರು ಕರ್ನಾಟಕ ವಿಧಾನ ಸಭೆ, ವಿಧಾನ ಸಭಾ ಸಚಿವಾಲಯ, ವಿಧಾನಸೌಧ
5. ಸಭಾಪತಿಗಳ ಅಪ್ತ ಕಾರ್ಯದರ್ಶಿಯವರು ಕರ್ನಾಟಕ ವಿಧಾನ ಪರಿಷತ್ ಸಚಿವಾಲಯ, ವಿಧಾನಸೌಧ
6. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
7. ಎಲ್ಲಾ ಪ್ರಾದೇಶಿಕ ಆಯುಕ್ತರುಗಳು,
8. ಎಲ್ಲಾ ಜಿಲ್ಲಾಧಿಕಾರಿಗಳು,
9. ಎಲ್ಲಾ ಇಲಾಖಾ ಮುಖ್ಯಸ್ಥರು,
10. ಎಲ್ಲಾ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು, ಜಿಲ್ಲಾ ಪಂಚಾಯತ್,
11. ಆಯುಕ್ತರು , ಆರೋಗ್ಯ ಕುಟುಂಬ ಮತ್ತು ಕಲ್ಯಾಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು
12. ಎಲ್ಲಾ ವಿಶ್ವವಿದ್ಯಾಲಯದ ಉಪ ಕುಲಪತಿಗಳು
13. ಎಲ್ಲಾ ನಿಗಮ/ಮಂಡಳಿ/ಸ್ವಾಯತ್ತ ಸಂಸ್ಥೆಗಳು.
14. ಆಯುಕ್ತರು, ಬೃಹತ್ ಬೆಂಗಳೂರು ಮಹಾ ನಗರ ಪಾಲಿಕೆ, ಬೆಂಗಳೂರು.
15. ಎಲ್ಲಾ ಮಹಾ ನಗರ ಪಾಲಿಕೆ/ ನಗರ ಸಭೆಗಳ ಆಯುಕ್ತರು,
16. ವ್ಯವಸ್ಥಾಪಕ ನಿರ್ದೇಶಕರು, ಬಿ.ಎಂ.ಆರ್.ಸಿ.ಎಲ್.
17. ಎಲ್ಲಾ ಮಾನ್ಯ ಸಚಿವರುಗಳ ಆಪ್ತ ಕಾರ್ಯದರ್ಶಿಗಳು,
18. ಹಿರಿಯ ಆರೋಗ್ಯ ಪರಿವೀಕ್ಷಕರು/ಮೇಲ್ವಿಚಾರಕರು/ಭದ್ರತಾಧಿಕಾರಿಗಳು, ವಿಧಾನಸೌಧ, ವಿಕಾಸಸೌಧ ಮತ್ತು ಬಹುಮಹಡಿ ಕಟ್ಟಡ, ಬೆಂಗಳೂರು.
19. ಹೆಚ್ಚುವರಿ ಪ್ರತಿಗಳು.

Scanned with CamScanner

# ಅನುಬಂಧ

## ಕೊರೊನಾ ವೈರಸ್ (ಕೋವಿಡ್-19)ನ ನಿಯಂತ್ರಣಕ್ಕಾಗಿ

## ಅನುಸರಿಸಬೇಕಾದ ಕ್ರಮಗಳು

- ವೈಯುಕ್ತಿಕ ಸ್ವಚ್ಛತೆಯನ್ನು ಕಾಪಾಡಿಕೊಳ್ಳುವುದು ಮತ್ತು ಜನರೊಂದಿಗೆ ದೈಹಿಕ ಅಂತರವನ್ನು ಕಾಪಾಡಿಕೊಳ್ಳುವುದು
- ಆಗಾಗ್ಗೆ ಕೈಗಳನ್ನು ಚೆನ್ನಾಗಿ ತೊಳೆದುಕೊಳ್ಳುವ ಅಭ್ಯಾಸವನ್ನು ರೂಢಿಸಿಕೊಳ್ಳುವುದು. ಕೈಗಳನ್ನು ಸೋಪ್ ಮತ್ತು ನೀರನ್ನು ಬಳಸಿ ತೊಳೆದುಕೊಳ್ಳುವುದು ಅಥವಾ ತಕ್ಷಣಕ್ಕೆ ನೀರು ಸಿಗದೇ ಇದ್ದಾಗ 60% ಗಿಂತ ಜಾಸ್ತಿ ಆಲ್ಕೋಹಾಲ್ ಇರುವ ಸ್ಯಾನಿಟೈಸರ್ ಬಳಸಿ ಕೈಗಳನ್ನು ಸ್ವಚ್ಛಗೊಳಿಸುವುದು. ಕೈಗಳು ಸ್ವಚ್ಛವಾಗಿರುವಂತೆ ಗೋಚರಿಸಿದರೂ ಸಹ ಕೈಗಳನ್ನು ಆಗಾಗ್ಗೆ ತೊಳೆದುಕೊಳ್ಳುವುದು.
- ಕೆಮ್ಮುವಾಗ ಮತ್ತು ಸೀನುವಾಗ ಮೂಗು ಮತ್ತು ಬಾಯನ್ನು ಕರವಸ್ತ್ರದಿಂದ / ಟಿಶ್ಯೂ ಕಾಗದದಿಂದ ಮುಚ್ಚಿಕೊಳ್ಳುವುದು.
- ಟಿಶ್ಯೂ ಕಾಗದವನ್ನು ಬಳಸಿದ ನಂತರ ಕೂಡಲೇ ಮುಚ್ಚಿದ ತ್ಯಾಜ್ಯ ತೊಟ್ಟಿಯೊಳಗಡೆ ಬಿಸಾಡುವುದು.
- ಬೇರೆ ವ್ಯಕ್ತಿಗಳೊಂದಿಗೆ ಸಂವಹನ ನಡೆಸುವಾಗ ಸುರಕ್ಷಿತ ಅಂತರವನ್ನು ಕಾಪಾಡಿಕೊಳ್ಳುವುದು. ಅದರಲ್ಲೂ ಜ್ವರ, ಕೆಮ್ಮು ಮತ್ತು ಉಸಿರಾಟ ತೊಂದರೆಯಿಂದ ಬಳಲುತ್ತಿರುವ ವ್ಯಕ್ತಿಗಳಿಂದ ದೂರವಿರುವುದು.
- ಸೀನುವಾಗ ಮತ್ತು ಕೆಮ್ಮುವಾಗ ಮೊಣಕೈನ ಒಳಭಾಗದಲ್ಲಿ ಸೀನುವುದು ಹಾಗೂ ಕೆಮ್ಮುವುದು. ಯಾವುದೇ ಕಾರಣಕ್ಕೂ ಅಂಗೈಗಳನ್ನು ಬಳಸಿ ಸೀನುವುದು ಹಾಗೂ ಕೆಮ್ಮುವುದು ಮಾಡಬಾರದು.
- ದೇಹದ ತಾಪಮಾನವನ್ನು ಹಾಗೂ ಉಸಿರಾಟದ ಲಕ್ಷಣಗಳನ್ನು ನಿಯಮಿತವಾಗಿ ಪರಿಶೀಲಿಸಿಕೊಳ್ಳುತ್ತಿರುವುದು. ಉಸಿರಾಟ ತೊಂದರೆಯಿದ್ದಲ್ಲಿ ಹಾಗೂ ಜ್ವರ ಮತ್ತು ಕೆಮ್ಮಿನಿಂದ ಬಳಲುತ್ತಿದ್ದಲ್ಲಿ ಕೂಡಲೇ ವೈದ್ಯರ ಬಳಿ ತಪಾಸಣೆ ಮಾಡಿಸಿಕೊಳ್ಳುವುದು. ವೈದ್ಯರ ಬಳಿ ಹೋಗುವಾಗ ಮಾಸ್ಕನ್ನು ಧರಿಸುವುದು ಅಥವಾ ಬಾಯಿ ಮತ್ತು ಮೂಗನ್ನು ಬಟ್ಟೆಯಿಂದ ಮುಚ್ಚಿಕೊಂಡು ಹೋಗುವುದು.
- ಜ್ವರ/ನ್ಯುಮೋನಿಯಾದಂತಹ ರೋಗ ಲಕ್ಷಣಗಳಿದ್ದಲ್ಲಿ ದಯಮಾಡಿ ರಾಜ್ಯದ ಸಹಾಯವಾಣಿ ಸಂಖ್ಯೆ: **104** ಹಾಗೂ ಕರ್ನಾಟಕ ಸರ್ಕಾರ ಸಚಿವಾಲಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಹಗಲಿರುಳು ಕಾರ್ಯನಿರ್ವಹಿಸುತ್ತಿರುವ ಸಹಾಯವಾಣಿ ಸಂಖ್ಯೆ: **080-46848600 ಮತ್ತು 080-66692000ಗೆ** ಅಥವಾ ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯದ 24X7 ಸಹಾಯವಾಣಿ ಸಂಖ್ಯೆಯಾದ 011-23978046ಗೆ ಕರೆ ಮಾಡುವುದು.

Scanned with CamScanner

## ಅನುಸರಿಸಬಾರದ ಕ್ರಮಗಳು

- ಹಸ್ತಲಾಘವ ಮಾಡಬಾರದು.
- ಕೆಮ್ಮು ಹಾಗೂ ಜ್ವರದಿಂದ ಬಳಲುತ್ತಿದ್ದಲ್ಲಿ ಬೇರೆ ಜನರೊಂದಿಗೆ ನಿಕಟ ಸಂಪರ್ಕ ಹೊಂದಬಾರದು.
  ಅಂತಹವರು ಕಣ್ಣುಗಳು, ಮೂಗು ಮತ್ತು ಬಾಯನ್ನು ಸ್ಪರ್ಶಿಸಿಕೊಳ್ಳಬಾರದು.
- ಅಂಗೈಗಳನ್ನು ಬಳಸಿ ಸೀನುವುದು ಮತ್ತು ಕೆಮ್ಮುವುದನ್ನು ಮಾಡಬಾರದು.
- ಸಾರ್ವಜನಿಕ ಸ್ಥಳದಲ್ಲಿ ಉಗಿಯಬಾರದು.
- ಅನಗತ್ಯವಾಗಿ ಪ್ರಯಾಣಿಸಬಾರದು ಅದರಲ್ಲೂ ಕೊರೊನಾ ಸೋಂಕು ಬಾಧಿತ ಪ್ರದೇಶಗಳಿಗೆ ಪ್ರಯಾಣಿಸಬಾರದು.
- ಸಾರ್ವಜನಿಕ ಕೂಟ / ದೊಡ್ಡ ಸಮಾರಂಭಗಳಲ್ಲಿ ಭಾಗವಹಿಸಬಾರದು ಹಾಗೂ ಕ್ಯಾಂಟೀನ್ ಗಳಲ್ಲಿ ಗುಂಪಾಗಿ ಕುಳಿತುಕೊಳ್ಳಬಾರದು.
- ಜಿಮ್, ಕ್ಲಬ್ ಹಾಗೂ ಜನಸಂದಣಿಯಿಂದ ಕಿಕ್ಕಿರಿದ ಪ್ರದೇಶ ಮುಂತಾದುವುಗಳಿಗೆ ಭೇಟಿ ನೀಡಬಾರದು.
- ಕೊರೊನಾ ಬಗ್ಗೆ ವದಂತಿಗಳನ್ನು ಹಬ್ಬಿಸಬಾರದು ಹಾಗೂ ಭಯಪಡಬಾರದು.

Scanned with CamScanner